ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-1**

ಸಂಖ್ಯೆ:ಕ.ಪ.ಪು.ಸಂ/ಎಸ್.ಓ-03/01/2020-21 ದಿನಾಂಕ: 13.01.2021

# ಸುತ್ತೋಲೆ

ವಿಷಯ: 2020-21ನೇ ಸಾಲಿಗೆ ಕರ್ನಾಟಕ ರಾಜ್ಯ ಪಠ್ಯಕ್ರಮ ಶಾಲೆಗಳ 10ನೇ ತರಗತಿ ವಿದ್ಯಾರ್ಥಿಗಳಿಗೆ ಬೋಧನೆ-ಕಲಿಕೆ ಹಾಗೂ ಮೌಲ್ಯಮಾಪನಕ್ಕೆ ಗುರ್ತಿಸಿರುವ ವಿಷಯಾಂಶಗಳನ್ನು ಅನುಷ್ಠಾನಕ್ಕಾಗಿ ಉಪನಿರ್ದೇಶಕರು(ಆಡಳಿತ) ಮೂಲಕ ಪ್ರಚುರಪಡಿಸುವ ಬಗ್ಗೆ.

ಉಲ್ಲೇಖ: ಕಡತ ಸಮಸಂಖ್ಯೆಯಲ್ಲಿ ಸರ್ಕಾರವು ದಿನಾಂಕ:13.01.2021ರಂದು ಅನುಮೋದಿಸಿದಂತೆ

***

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖದನ್ವಯ 2020-21ನೇ ಸಾಲಿನಲ್ಲಿ ಕೋವಿಡ್-19ರ ಕಾರಣದಿಂದಾಗಿ 10ನೇ ತರಗತಿ ವಿದ್ಯಾರ್ಥಿಗಳಿಗೆ ನೇರ ಬೋಧನೆ-ಕಲಿಕೆಗೆ 2021 ಜನವರಿ 1 ರಿಂದ ತರಗತಿಗಳು ಪ್ರಾರಂಭವಾಗಿರುತ್ತವೆ. ಈ ಮೊದಲು ಆಗಸ್ಟ್ 4, 2020ರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಕಲಿಕೆಗೆ ಪೂರಕವಾಗುವಂತೆ ವಿದ್ಯಾಗಮ ಕಾರ್ಯಕ್ರಮವನ್ನು ಹಾಗೂ ಆನ್‌ಲೈನ್ ಮೂಲಕ (ಚಂದನವಾಹಿನಿಯ ಸಂವೇದ ಕಾರ್ಯಕ್ರಮವನ್ನು ಒಳಗೊಂಡಂತೆ) ಶಿಕ್ಷಣವನ್ನು ನೀಡಲಾಗಿದೆ ಹಾಗೂ ಈ ಕಾರ್ಯಕ್ರಮವನ್ನು ಈಗಲೂ ಮುಂದುವರೆಸಲಾಗುತ್ತಿದೆ.

ಮುಂದುವರೆದು ಪ್ರಸ್ತುತ ಶಾಲೆಗಳಲ್ಲಿ ಬೋಧನೆ, ಕಲಿಕೆ ಹಾಗೂ ಮೌಲ್ಯಮಾಪನ ಪ್ರಕ್ರಿಯೆ ಪ್ರಾರಂಭವಾಗಿರುವ ಹಿನ್ನಲೆಯಲ್ಲಿ 10ನೇ ತರಗತಿ ವಿದ್ಯಾರ್ಥಿಗಳಿಗೆ ಬೋಧನೆ-ಕಲಿಕೆ ಹಾಗೂ ಮೌಲ್ಯಮಾಪನಕ್ಕೆ ಗುರ್ತಿಸಿರುವ ವಿಷಯಾಂಶಗಳನ್ನು ಇದರೊಂದಿಗೆ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ) ಇವರಿಗೆ ಕಳುಹಿಸುತ್ತಾ ತಮ್ಮ ಜಿಲ್ಲೆಯಲ್ಲಿನ ರಾಜ್ಯ ಪಠ್ಯಕ್ರಮವನ್ನು ಅನುಸರಿಸುತ್ತಿರುವ ಶಾಲೆಗಳ ಗಮನಕ್ಕೆ ತಂದು 2020-21ನೇ ಸಾಲಿಗೆ ಮಾತ್ರ ಅನ್ವಯವಾಗುವಂತೆ ವಿದ್ಯಾರ್ಥಿಗಳಿಗೆ ಬೋಧನೆ, ಕಲಿಕೆ ಹಾಗೂ ಮೌಲ್ಯಮಾಪನ ಪ್ರಕ್ರಿಯೆಯಲ್ಲಿ ಅಳವಡಿಸಿಕೊಳ್ಳಲು ಸೂಚನೆಗಳನ್ನು ನೀಡಲು ತಿಳಿಸಿದೆ.

**(ಮಾನ್ಯ ಆಯುಕ್ತರ ಆದೇಶದ ಮೇರೆಗೆ)**

ನಿರ್ದೇಶಕರು(ಪ್ರೌಢ ಶಿಕ್ಷಣ)
ಸಾರ್ವಜನಿಕ ಶಿಕ್ಷಣ ಇಲಾಖೆ

ಇವರಿಗೆ:-

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ ಮತ್ತು ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಕಳುಹಿಸುತ್ತಾ ಕ್ರಮವಹಿಸಲು ತಿಳಿಸಿದೆ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಉಪನಿರ್ದೇಶಕರು (ಆಡಳಿತ) ರವರ ಮೂಲಕ ಮುಂದಿನ ಕ್ರಮಕ್ಕಾಗಿ.

**ಪ್ರತಿಯನ್ನು:**

01. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
02. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.

03. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಮಾಹಿತಿಗಾಗಿ

04. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ

05. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ

06. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ

07. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಹನಿರ್ದೇಶಕರು/ಸಿ.ಟಿ.ಇ ಪ್ರಾಂಶುಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ

08. ಕಛೇರಿ ಪ್ರತಿ